# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 803

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎಂ.ಎ ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 15.12.2020

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಲಾಕ್ ಡೌನ್ ಸಮಯದಲ್ಲಿ ಬಡವರಿಗೆ ಸರ್ಕಾರದ ವತಿಯಿಂದ ಒದಗಿಸಲಾದ ಪಡಿತರವು ಸೂಕ್ತ ಫಲಾನುಭವಿಗಳಿಗೆ ಸೂಕ್ತ ಸಮಯಕ್ಕೆ ಸಿಗದೆ ದಲ್ಲಾಳಿಗಳ ಪಾಲಾಗಿ ಬಡವರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ. ಕೋವಿಡ್-19 ಲಾಕ್ ಡೌನ್ ಸಂಧರ್ಭದಲ್ಲಿ ಫಲಾನುಭವಿಗಳಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ಪಡಿತರ ವಿತರಣೆಯನ್ನು ನಿರ್ವಹಿಸಲಾಗಿದೆ. ಬಯೋಮೆಟ್ರಿಕ್ ವ್ಯವಸ್ಥೆಗೆ ಪರ್ಯಾಯವಾಗಿ ಆಧಾರ್ ಓಟಿಪಿ ಮತ್ತು ಮೊಬೈಲ್ ಓಟಿಪಿ ವ್ಯವಸ್ಥೆಗಳನ್ನೂ ಕೂಡ ಜಾರಿಗೊಳಿಸಿ ಪಡಿತರ ವಿತರಿಸಲಾಗಿದೆ.<br>ಇದರೊಂದಿಗೆ ಕೇಂದ್ರ ಸರ್ಕಾರದ ಪಿಎಂಜಿಕೆವೈ ಯೋಜನೆಯಡಿ ಹಂಚಿಕೆ ಮಾಡಲಾದ ಹೆಚ್ಚುವರಿ ಆಹಾರ ಧಾನ್ಯಗಳನ್ನು ಸಹ ಫಲಾನುಭವಿಗಳಿಗೆ ವಿತರಿಸಲಾಗಿದೆ. |
| ಆ | ಹಾಗಿದ್ದಲ್ಲಿ, ಸರ್ಕಾರ ಪಡಿತರ ವ್ಯವಸ್ಥೆಯ ಪಾರದರ್ಶಕತೆ ಕಾಪಾಡಲು ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಪಡಿತರ ಹಂಚಿಕೆಗಾಗಿ ಆಧಾರ್ ಓಟಿಪಿ ಮತ್ತು ಮೊಬೈಲ್ ಓಟಿಪಿ ವ್ಯವಸ್ಥೆಗಳನ್ನು ಕಡ್ಡಾಯವಾಗಿ ಅನುಸರಿಸಿದ್ದು ಪಾರದರ್ಶಕವಾಗಿ ವಿವರಗಳನ್ನು ಆನ್‌ಲೈನ್‌ನಲ್ಲಿ ರಾಜ್ಯದ ಮತ್ತು ಕೇಂದ್ರದ "ಅನ್ನವಿತರಣ್" ದತ್ತಾಂಶಗಳಲ್ಲಿ ದಾಖಲಿಸಿ ನಿರ್ವಹಿಸಲಾಗಿದೆ. |
| ಇ | ಅತ್ಯಂತ ಕಡು ಬಡವರಿಗೆ ಅಂತ್ಯೋದಯ ಯೋಜನೆಯಡಿ ನೀಡುವ ಪಡಿತರವು ಅವರಿಗೆ ಸಾಲದೆ ಅವರ ದೈನಂದಿನ ಜೀವನ ನಿರ್ವಹಣೆಗೆ ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿಯವರಿಗೆ ಹೆಚ್ಚಿನ ಸೌಲಭ್ಯ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಇಲ್ಲ. ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿದಾರರಿಗೆ ಪ್ರತಿ ಮಾಹೆ ಕೇಂದ್ರ ಸರ್ಕಾರದ ನಿಗಧಿತ ಹಂಚಿಕೆ ಪ್ರಮಾಣದಂತೆಯೇ ಪ್ರತಿ ಪಡಿತರ ಚೀಟಿಗೆ ತಲಾ 35 ಕೆ.ಜಿ. ಆಹಾರಧಾನ್ಯವನ್ನು ಉಚಿತವಾಗಿ ವಿತರಿಸಲಾಗುತ್ತಿದೆ. ಇದರಿಂದಾಗಿ ದೈನಂದಿನ ಜೀವನ ನಿರ್ವಹಣೆಗೆ ಅನುಕೂಲವಾಗಿದೆ. |
| ಈ | ಪಡಿತರ ವ್ಯವಸ್ಥೆಯಲ್ಲಿ ಅಂತ್ಯೋದಯ, ಬಿಪಿಎಲ್, ಎಪಿಎಲ್ ಪಡಿತರ ಚೀಟಿಯನ್ನು ಸಾರ್ವಜನಿಕರ ಆರ್ಥಿಕ ಪರಿಸ್ಥಿತಿ ಆಧರಿಸಿ ನೀಡಿರುವಂತೆ ರಾಜ್ಯದಲ್ಲಿರುವ ವಿಶೇಷ ಚೇತನರಿಗೆ, ವಿಧವೆಯರಿಗೆ ಹಾಗೂ ಇತರರಿಗೆ ವಿಶೇಷ ಪಡಿತರ ಚೀಟಿ ವಿತರಿಸಿ ಸೌಲಭ್ಯ ನೀಡುವ ಯೋಜನೆಯ ಕುರಿತು ಸರ್ಕಾರದ ನಿಲುವೇನು? (ವಿವರ ನೀಡುವುದು) | ಪಡಿತರ ವ್ಯವಸ್ಥೆಯಲ್ಲಿ ಅರ್ಹ ಫಲಾನುಭವಿಗಳನ್ನು ರಾಜ್ಯ ಸರ್ಕಾರದಿಂದ ನಿಗದಿಪಡಿಸಲಾಗಿರುವ ಮಾನದಂಡಗಳನ್ನು ಅನುಸರಿಸಿ ಆಯ್ಕೆ ಮಾಡಲಾಗಿದೆ. ಇದರಲ್ಲಿ ಕುಟುಂಬದ ಆರ್ಥಿಕ ಪರಿಸ್ಥಿತಿಯನ್ನು ಪರಿಗಣಿಸಲಾಗಿದೆ.<br>ವಿಶೇಷ ಚೇತನರಿಗೆ, ವಿಧವೆಯರು, ಏಡ್ಸ್ ರೋಗಿಗಳು, ಕುಷ್ಠ ರೋಗಿಗಳು ಇತ್ಯಾದಿ ಫಲಾನುಭವಿಗಳಿಗೆ ಅರ್ಹತೆ ಮೇರೆಗೆ ಆಯ್ಕೆ ಮಾಡಲು ಅವಕಾಶ ಕಲ್ಪಿಸಲಾಗಿದೆ. |

ಆನಾಸ 340 ಡಿಆರ್ ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.